ಸಿದ್ದರಬೆಟ್ಟದ ಬಾಳೆಹೊನ್ನೂರು ಖಾಸ ಶಾಖಾಮಠದ 20ನೇ ವರ್ಷದ ವಾರ್ಷಿಕೋತ್ಸವದ ಸಮಾರಂಭದಲ್ಲಿ ಮಠದಿಂದ ಕೊಡ ಮಾಡುವ ಸಿದ್ದ ಶ್ರೀ ಪ್ರಶಸ್ತಿಯನ್ನು ಸ್ವೀಕರಿಸಲು ಧರ್ಮಸ್ಥಳದ ಧರ್ಮಾಧಿಕಾರಿ ವೀರೇಂದ್ರ ಹೆಗಡೆ ಅವರಿಗೆ ಆಮಂತ್ರಿಸಲಾಯಿತು. ವೀರಭದ್ರ ಶಿವಾಚಾರ್ಯ ಸ್ವಾಮೀಜಿ ಮತ್ತಿತರರು ಉಪಸ್ಥಿತರಿದ್ದರು.

ಇಂದು ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣಾ ಸಭೆ

ಶಿರಾ: ಭಾರತ ಚುನಾವಣಾ ಆಯೋಗದ ಆದೇಶದಂತೆ ಕರ್ನಾಟಕ ರಾಜ್ಯದಲ್ಲಿ ನಡೆಯಲಿರುವ 'ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ-2026' ಕುರಿತು ಮಾಧ್ಯಮಗಳಿಗೆ ಮಾಹಿತಿ ನೀಡಲು ತಾಲೂಕಿನಲ್ಲಿ ಜೂನ್ 3 ರಂದು ನಗರಸಭೆ ಕಾರ್ಯಾಲಯದ ಕಚೇರಿ ಸಭಾಂಗಣದಲ್ಲಿ ಮಧ್ಯಾಹ್ನ 12:30ಕ್ಕೆ ವಿಶೇಷ ಸಭೆ ಆಯೋಜಿಸಲಾಗಿದೆ.

ತುಮಕೂರು ಜಿಲ್ಲಾಧಿಕಾರಿಗಳ ಸೂಚನೆಯ ಮೇರೆಗೆ ಜೂನ್ ತಿಂಗಳಿನಲ್ಲಿ ನಡೆಯುವ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆಗೆ ಸಂಬಂಧಿಸಿದಂತೆ, ಚುನಾವಣಾ ಆಯೋಗದ ಮಾರ್ಗಸೂಚಿಗಳ ಸಂಪೂರ್ಣ ಮಾಹಿತಿಯನ್ನು ಒದಗಿಸಲು ಈ ಸಭೆ ಕರೆಯಲಾಗಿದೆ. 136-ಶಿರಾ ವಿಧಾನಸಭಾ ಕ್ಷೇತ್ರದ ಮತದಾರರ ನೋಂದಣಾಧಿಕಾರಿಗಳು (ತಹಶೀಲ್ದಾರ್) ಹಾಗೂ ಸಹಾಯಕ ಮತದಾರರ ನೋಂದಣಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸಭೆ ಜರುಗಲಿದೆ. ಶಿರಾ ತಾಲೂಕಿನ ಎಲ್ಲಾ ದಿನಪತ್ರಿಕೆ, ವಾರಪತ್ರಿಕೆ ಹಾಗೂ ದೃಶ್ಯ ಮಾಧ್ಯಮಗಳ ಪ್ರತಿನಿಧಿಗಳು ತಪ್ಪದೇ ಈ ಸಭೆಯಲ್ಲಿ ಪಾಲ್ಗೊಳ್ಳುವಂತೆ ತಹಶೀಲ್ದಾರ್ ಆನಂದ್ ಕುಮಾರ್ ಕೋರಿದ್ದಾರೆ.

ಶಾಲಾ ಪ್ರಾರಂಭೋತ್ಸವ

ಭಾರತೀನಗರ: ಕಡಿಲುವಾಗಿಲು ಗ್ರಾಮದ ಸರ್ಕಾರಿ ಪ್ರೌಢ ಶಾಲೆಯಲ್ಲಿ ಸೋಮವಾರ ಶಾಲಾ ಪ್ರಾರಂಭೋತ್ಸವ ಕಾರ್ಯಕ್ರಮ ಸಂಭ್ರಮದಿಂದ ಆಚರಿಸಲಾಯಿತು.

ಶಾಲಾ ಅಭಿವೃದ್ಧಿ ಮೇಲುಸ್ತುವಾರಿ ಸಮಿತಿ ಸದಸ್ಯ ಕೆ.ಟಿ. ಧನಂಜಯ ಮಾತನಾಡಿ, ಕಳೆದ ಸಾಲಿನ ಎಸ್ಸೆಸ್ಸೆಲ್ಸಿ ಪರೀಕ್ಷೆಯಲ್ಲಿ ಶಾಲೆಯು ಶೇ.100ರಷ್ಟು ಫಲಿತಾಂಶ ಪಡೆದಿರುವುದು ಸಂತಸ ತಂದಿದೆ. ಈ ವರ್ಷವೂ ಎಲ್ಲಾ ವಿದ್ಯಾರ್ಥಿಗಳು ಗುಣಾತ್ಮಕ ಫಲಿತಾಂಶ ಪಡೆಯುವ ಮೂಲಕ ಶಾಲೆ ಹಾಗೂ ಗ್ರಾಮದ ಕೀರ್ತಿಯನ್ನು ಹೆಚ್ಚಿಸಬೇಕೆಂದು ಸಲಹೆ ನೀಡಿದರು.

ಶಾಲಾ ಆವರಣವನ್ನು ತಳಿರುತೋರಣಗಳಿಂದ ಸಿಂಗರಿಸಲಾಗಿತ್ತು. ಶಾಲೆಗೆ ಆಗಮಿಸಿದ ವಿದ್ಯಾರ್ಥಿಗಳನ್ನು ಹುಗುಚ್ಚ ಹಾಗೂ ಸಿಹಿ ನೀಡಿ ಸ್ವಾಗತಿಸಲಾಯಿತು. ನಂತರ ನಡೆದ ಶಾಲಾ ಪ್ರಾರಂಭೋತ್ಸವ ಸಮಾರಂಭದಲ್ಲಿ ಶಾಲಾ ಅಭಿವೃದ್ಧಿ ಸಮಿತಿ ಸದಸ್ಯರಾದ ಕೆ. ಟಿ. ಧನಂಜಯ, ರಾಜೇಶ್, ರವಿ ಅವರು ಶಾಲಾ ಮಕ್ಕಳಿಗೆ ಪಠ್ಯಪುಸ್ತಕ ಹಾಗೂ ಸಮವಸ್ತ್ರಗಳನ್ನು ವಿತರಿಸಿದರು.

ಶಾಲಾ ಮುಖ್ಯ ಶಿಕ್ಷಕ ಈ. ಶಿವಕುಮಾರ್ ಅಧ್ಯಕ್ಷತೆವಹಿಸಿದ್ದರು. ಶಾಲಾ ಶಿಕ್ಷಕ, ಶಾಲಾ ಸಿಬ್ಬಂದಿ ಹಾಗೂ ಪೋಷಕರು ಭಾಗವಹಿಸಿದ್ದರು.

ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ ಕುರಿತು ಜಿಲ್ಲಾಧಿಕಾರಿ ಶುಭಕಲ್ಯಾಣ್ ಮಾಹಿತಿ

ನಮೂನೆ ಸಲ್ಲಿಸಿದರೆ ಮಾತ್ರ ಮತದಾರರ ಪಟ್ಟಿಯಲ್ಲಿ ಹೆಸರು

ಉದಯಕಾಲ ನ್ಯೂಸ್, ತುಮಕೂರು: ಜೂನ್ 30ರಿಂದ ಆರಂಭವಾಗಲಿರುವ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ- 2026 ಸಂದರ್ಭದಲ್ಲಿ ಮತಗಟ್ಟೆ ಅಧಿಕಾರಿಗಳು ನೀಡುವ ಗಣತಿ ನಮೂನೆ ಭರ್ತಿ ಮಾಡಿ ಸಲ್ಲಿಸಿದಲ್ಲಿ ಮಾತ್ರ ಪರಿಷ್ಕೃತ ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರು ಇರಲಿದೆ. ಮತದಾರರು ತಪ್ಪದೇ ನಮೂನೆ ಭರ್ತಿ ಮಾಡಿ ತಮ್ಮ ಮತಗಟ್ಟೆ ಅಧಿಕಾರಿಗಳಿಗೆ ಅವಧಿಯೊಳಗೆ ಸಲ್ಲಿಸುವಂತೆ ಜಿಲ್ಲಾಧಿಕಾರಿ ಶುಭಕಲ್ಯಾಣ್ ತಿಳಿಸಿದ್ದಾರೆ.

ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ-2026 (ಎಸ್ಐಆರ್) ಸಂಬಂಧ ನಗರದ ಕೇಂದ್ರ ಗ್ರಂಥಾಲಯದಲ್ಲಿ ಕರೆದಿದ್ದ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಜೂನ್ 20ರಿಂದ 29ರವರೆಗೆ ತರಬೇತಿ, ನಮೂನೆಗಳ ಮುದ್ರಣ ಇತ್ಯಾದಿ ತಯಾರಿಗಳನ್ನು ಮಾಡಿಕೊಂಡು ಜೂನ್ 30ರಿಂದ ಜುಲೈ 29ರವರೆಗೆ ಮತಗಟ್ಟೆ ಅಧಿಕಾರಿಗಳು ಮನೆ ಮನೆಗೆ ತೆರಳಿ ಮತದಾರರ ಪಟ್ಟಿಯ ಮಾಹಿತಿಯ ಗಣತಿ ನಮೂನೆಯನ್ನು ನೀಡಲಿದ್ದಾರೆ. 2025ರ ಮತದಾರರ ಪಟ್ಟಿಯಲ್ಲಿರುವಂತೆ ಸಂಬಂಧಿಸಿದ ಮಾಹಿತಿ ಈಗಾಗಲೇ ಮುದ್ರಣವಾಗಿದೆ.

ಉಳಿದ ಮಾಹಿತಿಯನ್ನು ನಿಗದಿತ ಅವಧಿಯಲ್ಲಿ ಆ ಮನೆಯ ಮತದಾರರು ತುಂಬಿ ನಿರ್ದಿಷ್ಟ ದಾಖಲೆಯೊಂದಿಗೆ ಮರಳಿ ಮತಗಟ್ಟೆ ಅಧಿಕಾರಿಗೆ ನೀಡಬೇಕು. ಒಂದೊಮ್ಮೆ ಅದನ್ನು ಸಲ್ಲಿಸದಿದ್ದಲ್ಲಿ ಅವರ ಹೆಸರು ಅಂತಿಮ ಮತದಾರರ ಪಟ್ಟಿಯಿಂದ ಹೊರಗುಳಿಯಲಿದೆ ಎಂದು ತಿಳಿಸಿದರು.

ನಿರಂತರ ಪ್ರಕ್ರಿಯೆ: ಮತದಾರರ ಪಟ್ಟಿ ಪರಿಷ್ಕರಣೆ ಒಂದು ನಿರಂತರ ಪ್ರಕ್ರಿಯೆ. ಅಲ್ಲಿ ಕೇವಲ ಮತದಾರರ ಹೆಸರು ಸೇರ್ಪಡೆ, ತೆಗೆಯುವುದು ಹಾಗೂ ವಿಳಾಸ ಬದಲಾವಣೆ ನಡೆಯುತ್ತದೆ. ಯಾವೊಬ್ಬ ಮತದಾರರೂ ಮತದಾನದಿಂದ ಹೊರಗುಳಿಯಬಾರದು. ಪ್ರತಿಯೊಬ್ಬರಿಗೂ ಮುಕ್ತ ಹಾಗೂ ನ್ಯಾಯಸಮ್ಮತ ಚುನಾವಣೆಯಲ್ಲಿ ಭಾಗವಹಿಸುವ ಅವಕಾಶ ದೊರಕಿಸುವಂತೆ ಮಾಡುವ ಉದ್ದೇಶದಿಂದ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಮಾಡಲಾಗುತ್ತಿದೆ ಎಂದರು.

ಈ ಪ್ರಕ್ರಿಯೆ ದೇಶದಲ್ಲಿ ಇದೇ ಮೊದಲಲ್ಲ ಹಾಗೂ ಕರ್ನಾಟಕದಲ್ಲಿ ಕೂಡ 2002ರಲ್ಲಿ ಸಮಗ್ರ ಪರಿಷ್ಕರಣೆ ಆಗಿದ್ದು ಈಗ 2026ರಲ್ಲಿ ಮಾಡಲಾಗುತ್ತಿದೆ. ಇದು ಭಾರತ ಚುನಾವಣಾ ಆಯೋಗದ ಮಾರ್ಗಸೂಚಿಯಂತೆ ರಾಜ್ಯ ಮುಖ್ಯ ಚುನಾವಣಾಧಿಕಾರಿಗಳು ರಾಜ್ಯದ ಎಲ್ಲ ಜಿಲ್ಲಾ ಚುನಾವಣಾಧಿಕಾರಿಗಳಿಗೆ ತರಬೇತಿ ನೀಡಿದ್ದು, ಅದರಂತೆ ತುಮಕೂರು ಜಿಲ್ಲೆಯಲ್ಲಿ ಕೂಡ ಈ ಪ್ರಕ್ರಿಯೆ ನಡೆಯಲಿದೆ ಎಂದು ವಿವರಿಸಿದರು.

> ಮತದಾರರ ಜಾಗೃತಿ ಸಂಬಂಧಿಸಿದಂತೆ ಜಿಲ್ಲಾದ್ಯಂತ ವಿವಿಧ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಗ್ರಾಪಂ ಮಟ್ಟದಲ್ಲಿ ಹಾಗೂ ಶಾಲಾ ಹಂತದಲ್ಲಿ ಮತದಾರರ ಜಾಗೃತಿ ಕ್ಲಬ್‌ಗಳನ್ನು ಸ್ಥಾಪಿಸಲಾಗಿದೆ.
>
> ಬಿ.ವಿ.ಅಶ್ವಿಜ, ಜಿಪಂ ಸಿಇಒ

ಅಕ್ಟೋಬರ್ 1ರಂದು ಅರ್ಹತಾ ದಿನಾಂಕ ಪ್ರಕಟಿಸಲಿದ್ದು, ಜೂನ್ 30ರಿಂದ ಜುಲೈ 29ರವರೆಗೆ ಮತಗಟ್ಟೆ ಅಧಿಕಾರಿಗಳು ಮನೆ ಮನೆ ಭೇಟಿ, ಜುಲೈ 29ರಂದು ಮತಗಟ್ಟೆಗಳ ಕ್ರಮಬದ್ಧಗೊಳಿಸುವಿಕೆ, ಆಗಸ್ಟ್ 5 ಮತದಾರರ ಪಟ್ಟಿ ಕರಡು ಪ್ರಕಟ, ಆಗಸ್ಟ್ 5ರಿಂದ ಸೆಪ್ಟೆಂಬರ್ 4ರವರೆಗೆ ಆಕ್ಷೇಪಣೆಗಳಿಗೆ ಅವಕಾಶ ಹಾಗೂ ಆಗಸ್ಟ್ 5ರಿಂದ ಅಕ್ಟೋಬರ್ 3ರವರೆಗೆ ಆಕ್ಷೇಪಣೆಗಳನ್ನು ಸರಿಪಡಿಸಿಕೊಳ್ಳಲು ಅವಕಾಶ ಹಾಗೂ ಅಂತಿಮವಾಗಿ ಅಕ್ಟೋಬರ್ 7ರಂದು ಅಂತಿಮ ಮತದಾರರ ಪಟ್ಟಿಯನ್ನು ಪ್ರಕಟಿಸಲಾಗುವುದು ಎಂದು ತಿಳಿಸಿದರು.

2356 ಮತಗಟ್ಟೆಗಳು: ತುಮಕೂರು ಜಿಲ್ಲೆಯಲ್ಲಿ ಒಟ್ಟು 2356 ಮತಗಟ್ಟೆಗಳನ್ನು ಗುರುತಿಸಲಾಗಿದ್ದು, ಎಲ್ಲೆಡೆ ಮತಗಟ್ಟೆ ಅಧಿಕಾರಿಗಳು ಇರಲಿದ್ದಾರೆ. 2025ರ ಮತದಾರರ ಪಟ್ಟಿಯಂತೆ ಜಿಲ್ಲೆಯ ಒಟ್ಟು 11 ವಿಧಾನಸಭಾ ಕ್ಷೇತ್ರಗಳಲ್ಲಿ ಪುರುಷ ಹಾಗೂ ಮಹಿಳೆಯರು ಸೇರಿ ಒಟ್ಟು 22,98,096 ಮತದಾರರಿದ್ದು, ಈ ಎಲ್ಲ ಮತದಾರರ ಗಣತಿಯೂ ಸಮಗ್ರ ಪರಿಷ್ಕರಣೆಯಲ್ಲಿ ಆಗಲಿದೆ. ಈ ಅವಧಿಯಲ್ಲಿ ಮತದಾರರ ಪಟ್ಟಿಯಲ್ಲಿದ್ದು, ಮೃತಪಟ್ಟವರ ಹೆಸರು ಕೈಬಿಡುವ, 18 ತುಂಬಿರುವ ಹೊಸ ಮತದಾರರನ್ನು ಸೇರ್ಪಡೆಗೊಳಿಸುವ ಹಾಗೂ ಸ್ಥಳಾಂತರಗೊಂಡ ಮತದಾರರು ಸೇರಿದಂತೆ ಸಂಪೂರ್ಣ ಪಟ್ಟಿಯ ಸಮಗ್ರ ಪರಿಷ್ಕರಣೆ ಈ ಹಂತದಲ್ಲಿ ಆಗಲಿದೆ ಎಂದು ತಿಳಿಸಿದರು.

ಅಪರ ಜಿಲ್ಲಾಧಿಕಾರಿ ಡಾ.ಎನ್.ತಿಪ್ಪೇಸ್ವಾಮಿ ಉಪಸ್ಥಿತರಿದ್ದರು.

ಸಾವಯವ ಸಂತೆಗೆ ದರ್ಶನ್ ಪುಟ್ಟಣ್ಣಯ್ಯ ಚಾಲನೆ

ಉದಯಕಾಲ ನ್ಯೂಸ್, ಪಾಂಡವಪುರ: ತಾಲೂಕನ್ನು ಕೃಷಿ ತಾಲೂಕನ್ನಾಗಿ ಮಾಡಲು ರಾಜ್ಯ ಸರ್ಕಾರವು ಬಜೆಟ್‌ನಲ್ಲಿ ಘೋಷಣೆ ಮಾಡಿರುವುದರಿಂದ ಪ್ರಥಮ ಬಾರಿಗೆ ಪಾಂಡವಪುರ ಸಾವಯವ ಸಂತೆ ಆಯೋಜಿಸಲಾಗಿದೆ ಎಂದು ಶಾಸಕ ದರ್ಶನ್ ಪುಟ್ಟಣ್ಣಯ್ಯ ತಿಳಿಸಿದರು.

ತಾಪಂ ಆವರಣದಲ್ಲಿ ಪುಟ್ಟಣ್ಣಯ್ಯ ಫೌಂಡೇಷನ್, ರೈತ ಸಂಘ ಹಾಗೂ ಸಾವಯವ ಬೆಳೆಗಾರರು ಆಯೋಜಿಸಿದ್ದ ಪಾಂಡವಪುರ ಸಾವಯವ ವಿಷಮುಕ್ತ ಸಂತೆಯು ಪಟ್ಟಣದಲ್ಲಿ 15 ದಿನಗಳಿಗೊಮ್ಮೆ ನಡೆಯಲಿದೆ. ರಾಸಾಯನಿಕ ಗೊಬ್ಬರ ಔಷಧಿಗಳಿಂದ ಬೆಳೆದ ತರಕಾರಿ, ಸೊಪ್ಪು, ಹಣ್ಣು, ಅಕ್ಕಿ, ರಾಗಿ, ಇತರೆ ಧಾನ್ಯಗಳು ಸೇರಿದಂತೆ ಆಹಾರ ಪದಾರ್ಥಗಳಿಂದ ಆರೋಗ್ಯದ ಮೇಲೆ ಅನೇಕ ರೋಗಗಳು ಬೀರುತ್ತಿರುವುದು ಎಲ್ಲರಿಗೂ ತಿಳಿದಿದೆ. ಅಡುಗೆ ಎಣ್ಣೆ ತಯಾರಿಕೆಗೆ ಕೂಡ ಪೆಟ್ರೋಲ್‌ನ ಉಪ ಉತ್ಪನ್ನಗಳನ್ನ ಬಳಸಲಾಗುತ್ತಿದೆ. ಹೀಗಾಗಿ ಆರೋಗ್ಯ ಕಡೆ ನಾವೆಲ್ಲರೂ ಗಮನಹರಿಸಬೇಕಿದೆ ಎಂದರು.

ಗ್ರಾಹಕರ ಆಧಾರದ ಮೇಲೆ ರೈತರಿಂದ ನೇರ ಸಂತೆ ಮಾಡಿಸಲಾಗುವುದು, ವಿಷಮುಕ್ತ ಆಹಾರ ಸೇವನೆಯಿಂದ ಉತ್ತಮ ಆರೋಗ್ಯ ತರಕಾರಿ, ಎಣ್ಣೆ, ಮಿತವಾದ ಆಹಾರ ಸೇವನೆ ಮಾಡಿದರಷ್ಟೇ ಆರೋಗ್ಯವಂತರಾಗಿರಲು ಸಾಧ್ಯ. ಹಾಗಾಗಿ ಸಾಧ್ಯವಾದಷ್ಟು ಸಾವಯವ, ನೈಸರ್ಗಿಕ ಕೃಷಿ ಉತ್ಪನ್ನಗಳನ್ನು ಬಳಕೆ ಮಾಡಬೇಕಿದೆ ಎಂದು ಹೇಳಿದರು.

ಸಾವಯವ ರೈತ ಮಡಕೆಪಟ್ಟಣ ರಾಮೇಗೌಡ ಮಾತನಾಡಿ, ರಾಸಾಯನಿಕ ಗೊಬ್ಬರ ಔಷಧಿಗಳಿಂದ ಇಳುವರಿ ಹೆಚ್ಚಾಗುತ್ತದೆ. ಆದರೆ ಅದರ ಸೇವನೆಯಿಂದ ಆರೋಗ್ಯದ ಮೇಲೆ ಪರಿಣಾಮ ಬೀರುತ್ತಿದೆ. ಅತಿ ಹೆಚ್ಚು ರಾಸಾಯನಿಕ ಬಳಕೆಯಿಂದಾಗಿ ವಿಷಯುಕ್ತ ಆಹಾರ ಉತ್ಪಾದನೆಯಾಗುತ್ತಿದೆ. ಇದರಿಂದಾಗಿ ರೋಗಗಳು ಹೆಚ್ಚಾಗುತ್ತಿದೆ ಮತ್ತು ಸಾವುಗಳು ಸಂಭವಿಸುತ್ತಿವೆ. ಹಾಗಾಗಿ ನಮಗೆ ಸಾವಯವ ಕೃಷಿ ಉತ್ಪನ್ನದ ಆಹಾರ ಪದಾರ್ಥಗಳನ್ನು ಬಳಸುವುದು ಅಗತ್ಯವಾಗಿದೆ ಎಂದರು.

ಸಾರ್ವಜನಿಕರು ಸಂತೆಯಲ್ಲಿ ಸಾವಯವ ಮತ್ತು ನೈಸರ್ಗಿಕ ಕೃಷಿ ಉತ್ಪನ್ನಗಳಾದ ಬೆಂಡೆಕಾಯಿ, ಬದನೆಕಾಯಿ, ಕ್ಯಾರೆಟ್, ಹಿರೇಕಾಯಿ, ಸವತೆಕಾಯಿ, ಬೀಟ್ರೋಟ್, ಸೊಪ್ಪು, ಗಾಣದ ಅಡುಗೆ ಎಣ್ಣೆ, ದೇಸಿ ಅಕ್ಕಿ, ಹಲಸಿನ ಹಣ್ಣು, ಮಾವು,ಬಾಳೆ ಹಣ್ಣು, ಸೇರಿದಂತೆ ಹಲವು ಉತ್ಪನ್ನಗಳು ಸಂತೆಯಲ್ಲಿ ಜನರು ಖರೀದಿ ಮಾಡಿದರು.

ಸಾವಯವ ಮಾವಿನ ಹಣ್ಣುಗಳಾದ ರಸಪೂರಿ, ಬಾದಾವಿ, ತೋತಾಪುರಿ ಸೇರಿದಂತೆ ಹಲವು ಬಗೆಯ ಮಾವಿನ ಹಣ್ಣನ್ನು ರೈತರು ಮಾರಾಟಕ್ಕೆ ಇಡಲಾಗಿತ್ತು. ಸಂತೆಯಲ್ಲಿ ಭಾಗವಹಿಸಿದ್ದ ಜನರು ಮಾವಿನ ಹಣ್ಣನ್ನು ಕೊಳ್ಳಲು ಮುಂದಾದರು.

ತಾಪಂ ಇಒ ವೀಣಾ, ರೈತ ಸಂಘದ ಜಿಲ್ಲಾಧ್ಯಕ್ಷ ಎ.ಎಲ್. ಕೆಂಪೂಗೌಡ, ತಾಲೂಕು ಅಧ್ಯಕ್ಷ ವೈ.ಪಿ.ಮಂಜುನಾಥ್, ಹಿರಿಯ ಮುಖಂಡರಾದ ಕೆ.ಟಿ. ಗೋವಿಂದೇಗೌಡ, ಕೆನ್ನಾಳು ನಾಗರಾಜು, ಎಸ್.ದಯಾನಂದ್, ಮಹಿಳಾ ಘಟಕದ ಅಧ್ಯಕ್ಷೆ ರೂಪ ಅರಳಕುಪ್ಪೆ, ಪಾಪೇಗೌಡ, ಮಂಜುನಾಥ, ಸೋಮೇಗೌಡ, ಜಿರಂಜೀವಿ, ವೆಂಕಟೇಶ್ ಇದ್ದರು.

ಕೊರಟಗೆರೆ: ನಿವೃತ್ತ ನೌಕರರಿಗೆ ಬೀಳ್ಕೊಡುಗೆ

ಉದಯಕಾಲ ನ್ಯೂಸ್, ಕೊರಟಗೆರೆ: ಸರ್ಕಾರಿ ಹುದ್ದೆ ಎನ್ನುವುದು ಕೇವಲ ಉದ್ಯೋಗವಲ್ಲ, ಜನಸೇವೆಯ ಜವಾಬ್ದಾರಿಯಾಗಿದೆ. ಪ್ರಾಮಾಣಿಕತೆ ಮತ್ತು ನಿಷ್ಠೆಯಿಂದ ಕೆಲಸ ಮಾಡಿದಾಗ ಮಾತ್ರ ಅಧಿಕಾರಿಗಳು ಜನರ ಹೃದಯದಲ್ಲಿ ಶಾಶ್ವತ ಸ್ಥಾನ ಪಡೆಯಲು ಸಾಧ್ಯ ಎಂದು ತಹಶೀಲ್ದಾರ್ ಕೆ. ಮಂಜುನಾಥ್ ಅಭಿಪ್ರಾಯಪಟ್ಟರು.

ಪಟ್ಟಣದ ತಾಲೂಕು ಕಚೇರಿ ಸಭಾಂಗಣದಲ್ಲಿ ಆಯೋಜಿಸಿದ್ದ ವಯೋನಿವೃತ್ತಿ ಸನ್ಮಾನ ಸಮಾರಂಭದಲ್ಲಿ ಸಿ.ಎನ್. ದುರ್ಗಹೋಬಳಿಯ ಉಪ ತಹಶೀಲ್ದಾರ್ ಎ.ಜೆ. ರಾಜು ಹಾಗೂ ದ್ವಿತೀಯ ದರ್ಜೆ ಸಹಾಯಕಿ ಶಾಂತಮ್ಮ ಅವರನ್ನು ಗೌರವಿಸಿ ಮಾತನಾಡಿದರು.

ಸಾರ್ವಜನಿಕರ ಸಮಸ್ಯೆಗಳಿಗೆ ಸ್ಪಂದಿಸುವ ಮನೋಭಾವ ಮತ್ತು ಕರ್ತವ್ಯನಿಷ್ಠೆಯ ಸೇವೆಯೇ ಅಧಿಕಾರಿಯ ನಿಜವಾದ ಸಂಪತ್ತು. ಜನರು ನಮ್ಮ ಕೆಲಸವನ್ನು ಮೆಚ್ಚಿ ಒಳ್ಳೆಯ ಮಾತು ಆಡಿದಾಗ ಮಾತ್ರ ನಮ್ಮ ಸೇವೆಗೆ ಅರ್ಥ ಸಿಗುತ್ತದೆ. ಎ.ಜೆ. ರಾಜು ಹಾಗೂ ಶಾಂತಮ್ಮ ಅವರು ತಮ್ಮ ಕಾರ್ಯನಿಷ್ಠೆಯಿಂದ ಸಹೋದ್ಯೋಗಿಗಳು ಮತ್ತು ಸಾರ್ವಜನಿಕರ ಪ್ರಶಂಸೆಗೆ ಪಾತ್ರರಾಗಿದ್ದಾರೆ. ಇಂತಹ ಅಧಿಕಾರಿಗಳು ಇಲಾಖೆಗೆ ಮಾದರಿಯಾಗಿದ್ದಾರೆ ಎಂದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಉಪ ತಹಶೀಲ್ದಾರ್ ಎ.ಜೆ. ರಾಜು, ಸರ್ಕಾರಿ ಸೇವೆಯಲ್ಲಿ ವರ್ಗಾವಣೆ ಮತ್ತು ನಿವೃತ್ತಿ ಸಹಜ ಪ್ರಕ್ರಿಯೆಗಳಾಗಿದ್ದು, ಪ್ರತಿಯೊಬ್ಬ ನೌಕರನು ಮೇಲಧಿಕಾರಿಗಳ ನಿರ್ದೇಶನದಂತೆ ಪ್ರಾಮಾಣಿಕವಾಗಿ ಕೆಲಸ ನಿರ್ವಹಿಸಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಕಂದಾಯ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿ ಹಾಗೂ ಸಾರ್ವಜನಿಕರು ನಿವೃತ್ತರಾದ ಇಬ್ಬರು ನೌಕರರನ್ನು ಸನ್ಮಾನಿಸಿ ಶುಭ ಹಾರೈಸಿದರು.

ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ವೆಂಕಟೇಶ್ ಮೂರ್ತಿ, ವಸಂತಣ್ಣ, ಸಿ.ಡಿ. ಪ್ರಭಾಕರ್, ಶಿರಸ್ತೇದಾರ್ ವೆಂಕಟೇಶ್, ವೆಂಕಟರಂಗನ್, ಮಂಜುನಾಥ್, ಸೇರಿದಂತೆ ಅಧಿಕಾರಿಗಳು ಮತ್ತು ಸಿಬ್ಬಂದಿ ಉಪಸ್ಥಿತರಿದ್ದರು.

ರಂಗನಾಥ್‌ಗೆ ಸಚಿವ ಸ್ಥಾನ: ಕಾಂಗ್ರೆಸ್ ಮುಖಂಡರ ಆಗ್ರಹ

ಕುಣಿಗಲ್: ನೂತನ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಅವರು ತಾಲೂಕಿನ ನೀರಾವರಿ ಯೋಜನೆಗಳಿಗೆ ಮುಂದಿನ ದಿನಗಳಲ್ಲಿ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ ಎಂದು ಕಾಂಗ್ರೆಸ್ ಮುಖಂಡರು ಅಭಿಪ್ರಾಯ ವ್ಯಕ್ತಪಡಿಸಿದರು.

ಪಟ್ಟಣದ ಶಾಸಕರ ಕಚೇರಿಯಲ್ಲಿ ಮಂಗಳವಾರ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಮುಖಂಡರು, 2ನೇ ಬಾರಿಗೆ ಆಯ್ಕೆಯಾಗಿರುವ ಶಾಸಕ ಡಾ.ರಂಗನಾಥ್ ಅವರಿಗೆ ಈ ಬಾರಿ ಡಿ.ಕೆ ಶಿವಕುಮಾರ್ ಅವರ ಸಚಿವ ಸಂಪುಟದಲ್ಲಿ ಸಚಿವ ಸ್ಥಾನ ನೀಡಬೇಕು ಎಂದು ಆಗ್ರಹಿಸಿದರು.

ಕೆಪಿಸಿಸಿ ಸದಸ್ಯ ಬೇಗೂರು ನಾರಾಯಣ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ರಂಗಣ್ಣಗೌಡ, ಪ್ರಚಾರ ಸಮಿತಿ ಅಧ್ಯಕ್ಷ ಶಂಕರ್, ಯೂತ್ ಕಾಂಗ್ರೆಸ್ ಅಧ್ಯಕ್ಷ ಚಲಮಸಂದ್ರ ಸಂತೋಷ್, ಬೇಗೂರು ಮೂರ್ತಿ, ವೆಂಕಟರಾಮು, ಗಂಗಾಧರ್, ಶಿವಕುಮಾರ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಮಾದಿಹಳ್ಳಿ ಹಳ್ಳದ ಸೇತುವೆ ಕಾಮಗಾರಿಗೆ ಚಾಲನೆ

ಉದಯಕಾಲ ನ್ಯೂಸ್, ಕೆ.ಆರ್.ಪೇಟೆ: ಮಾದಿಹಳ್ಳಿ ಹಳ್ಳದ ಸೇತುವೆಯು ಹತ್ತಾರು ಗ್ರಾಮಗಳಿಗೆ ಸಂಪರ್ಕ ಕಲ್ಪಿಸುವ ರಸ್ತೆ. ಸದರಿ ಸೇತುವೆಯ ಪುನರ್ ನಿರ್ಮಾಣ ಕಾಮಗಾರಿಗೆ ಅನುದಾನ ನೀಡುವಂತೆ ವಿಧಾನಸಭೆಯ ಕಲಾಪದಲ್ಲಿ ಸರ್ಕಾರದ ಗಮನ ಸೆಳೆದಿದ್ದ